ಕರ್ನಾಟಕ ಸರ್ಕಾರದ ನಡವಳಿಗಳು

4022
29 MAR 2021

ವಿಷಯ: 2020–21ನೇ ಸಾಲಿನ ಬೆಳೆ ಸಮೀಕ್ಷೆಯ ಶೇ.1 ರಷ್ಟು ಪರಿಶೀಲನೆ ದತ್ತಾಂಶವನ್ನು ಪರಿಶೀಲಿಸಿರುವ ಸಿಬ್ಬಂದಿಗಳಿಗೆ ಗೌರವಧನ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: AGRI–AML–91/2020 ದಿನಾಂಕ:02.06.2020 ಮತ್ತು ಸೇರ್ಪಡೆ ಆದೇಶ ದಿನಾಂಕ:16.06.2020

2. ಸರ್ಕಾರದ ಆದೇಶ ಸಂಖ್ಯೆ:ಕೃಇ 83 ಕೃಕೈಉ 2020 ದಿ:07.08.2020

3. ಆಯುಕ್ತರು, ಕೃಷಿ ಇಲಾಖೆ ಇವರ ಪತ್ರ ಸಂಖ್ಯೆ: ಬೆಸವಿ/ಪತ್ರ ವ್ಯವಹಾರ/ 2020–21 ದಿನಾಂಕ:22.01.2021

*****

**ಪ್ರಸ್ತಾವನೆ:**

2020–21ನೇ ಸಾಲಿನ ಆಯವ್ಯಯ ಸಂಪುಟ–3ರಲ್ಲಿ ಬೆಳೆ ವಿಮೆ ಯೋಜನೆಯ ಲೆಕ್ಕ ಶೀರ್ಷಿಕೆ: 2401–00–110–0–07 ರಡಿ ಒಟ್ಟು ರೂ.900.00 ಕೋಟಿಗಳ ಅನುದಾನ ನಿಗದಿಪಡಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶ ಮತ್ತು ಸೇರ್ಪಡೆ ಆದೇಶದಲ್ಲಿ, ಕರ್ನಾಟಕ ರೈತ ಸುರಕ್ಷ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು 2020–21ನೇ ಸಾಲಿನಲ್ಲಿಯೂ ಮುಂದುವರೆಸಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ, ರಾಜ್ಯದಲ್ಲಿ 2020–21ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ–ಆಡಳಿತ) ರವರ ಮಾರ್ಪಡಿತ ಮೊಬೈಲ್ ಆ್ಯಪ್ ಬಳಸಿಕೊಂಡು ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮುಗಳ ಬೆಳೆ ಸಮೀಕ್ಷೆಯನ್ನು ಕೈಗೊಳ್ಳಲು ಅನುಮತಿಯನ್ನು ನೀಡಲಾಗಿದೆ.

ಮೇಲೆ ಓದಲಾದ (3)ರ ಆಯುಕ್ತರು, ಕೃಷಿ ಇಲಾಖೆ ಇವರ ಪ್ರಸ್ತಾವನೆಯಲ್ಲಿ, 2020–21ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಸಿಆಸುಇ(ಇ–ಆಡಳಿತ) ರವರು ಅಭಿವೃದ್ಧಿ ಪಡಿಸಿರುವ ಮಾರ್ಪಡಿಸಿದ ರೈತರ ಮೊಬೈಲ್ ಆಪ್ ಮತ್ತು ಖಾಸಗಿ ನಿವಾಸಿಗಳ ಮೊಬೈಲ್ ಆಪ್ ಬಳಸಿಕೊಂಡು ಅನುಷ್ಠಾನಗೊಳಿಸಲು ಸರ್ಕಾರಿ ಆದೇಶವನ್ನು ಹೊರಡಿಸಲಾಗಿದ್ದು, ಅದರಂತೆ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕಾರ್ಯ ಪೂರ್ಣಗೊಂಡಿದ್ದು, ಸರ್ಕಾರಿ ಆದೇಶದನ್ವಯ ಬೆಳೆ ಸಮೀಕ್ಷೆಯ ಶೇ.1 ರಷ್ಟು ದತ್ತಾಂಶವನ್ನು ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯ ಅಧಿಕಾರಿಗಳು ಕ್ಷೇತ್ರ ಮಟ್ಟದಲ್ಲಿ ಪರಿಶೀಲಿಸಬೇಕಾಗಿದ್ದು, ಅದರಂತೆ ಶೇ.100 ರಷ್ಟು ಪ್ರಗತಿಯನ್ನು ಸಾಧಿಸಲಾಗಿರುತ್ತದೆ. ದಿನಾಂಕ:31.08.2020 ರಂದು ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ

ಮಟ್ಟದ ಬೆಳೆ ಸಮೀಕ್ಷೆ ಉಪ ಸಮಿತಿ ಸಭೆಯಲ್ಲಿ 2020-21ನೇ ಸಾಲಿನ ಬೆಳೆ ಸಮೀಕ್ಷೆಯ ಶೇ.1 ರಷ್ಟು ದತ್ತಾಂಶವನ್ನು ಪರಿಶೀಲಿಸುವ ಅಧಿಕಾರಿಗಳಿಗೆ ಗೌರವಧನವನ್ನು ನೀಡಲು ಅವಕಾಶ ಕಲ್ಪಿಸುವ ಬಗ್ಗೆ ಚರ್ಚಿಸಲಾಗಿದ್ದು, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ನಿರ್ಧರಿಸಲಾಗಿರುತ್ತದೆ. ಅದರಂತೆ, ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಇವರ ದಿನಾಂಕ:01.01.2021 ರ ಪತ್ರದಲ್ಲಿ ಶೇ.1 ರಷ್ಟು ದತ್ತಾಂಶವನ್ನು ಪರಿಶೀಲಿಸುವ ಸಲುವಾಗಿ ಸರ್ಕಾರದ ಇಲಾಖೆಗಳಲ್ಲಿ ಸಿಬ್ಬಂದಿಯ ಕೊರತೆ ಇದ್ದು, ಬಾಹ್ಯ ಮೂಲದ ಸಿಬ್ಬಂದಿಗಳಿಗೂ ಸಹ ಪರಿಶೀಲನೆ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಪ್ರಯುಕ್ತ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಪರಿಶೀಲನೆ ಕಾರ್ಯದಲ್ಲಿ ತೊಡಗಿಕೊಂಡಿದ್ದ ಅಧಿಕಾರಿ/ಸಿಬ್ಬಂದಿ/ಬಾಹ್ಯ ಮೂಲದ ಸಿಬ್ಬಂದಿಗಳಿಗೆ ಕನಿಷ್ಠ ಪ್ರಯಾಣದ ವೆಚ್ಚವನ್ನು ಭರಿಸಲು ಅನುವಾಗುವಂತೆ ಒಂದು ಗ್ರಾಮಕ್ಕೆ ಕನಿಷ್ಠ ರೂ.500.00 ಗಳಂತೆ, ಈ ಕೆಳಕಂಡಂತೆ ಗೌರವಧನವನ್ನು ಮಂಜೂರು ಮಾಡಲು ಸೂಕ್ತ ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೃಷಿ ಆಯುಕ್ತರು ಕೋರಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ಯೋಜನೆ | ಲೆಕ್ಕ ಶೀರ್ಷಿಕೆ | ಶೇ.1 ರಷ್ಟು ಪರಿಶೀಲನೆ ನಡೆಸಿರುವ ಗ್ರಾಮಗಳ ಸಂಖ್ಯೆ | ಪ್ರತಿ ಗ್ರಾಮಕ್ಕೆ ಗೌರವಧನದ ಮೊತ್ತ ರೂ. ಗಳಲ್ಲಿ | ಒಟ್ಟು ಮಂಜೂರು ಮಾಡಬೇಕಾದ ಅನುದಾನ |
|---|---|---|---|---|
| ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ | 2401-00-110-0-07-051 | 5712 | 500.00 | 28.56 |

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ:

## ಸರ್ಕಾರದ ಆದೇಶ ಸಂಖ್ಯೆ:ಕೃಇ 23 ಕೃಕೈಉ 2021, ಬೆಂಗಳೂರು, ದಿನಾಂಕ:25.03.2021

2020-21ನೇ ಸಾಲಿನಲ್ಲಿ ಬೆಳೆ ಸಮೀಕ್ಷೆಯ ಶೇ.1 ರಷ್ಟು ದತ್ತಾಂಶವನ್ನು ಪರಿಶೀಲನೆ ನಡೆಸಿರುವ ಸಿಬ್ಬಂದಿಗಳಿಗೆ ಗೌರವಧನವನ್ನು ಮಂಜೂರು ಮಾಡಲು, ಒಂದು ಗ್ರಾಮಕ್ಕೆ ಕನಿಷ್ಠ ಪ್ರಯಾಣದ ವೆಚ್ಚ **ರೂ.500/-** ಗಳಂತೆ **5712 ಗ್ರಾಮ**ಗಳಿಗೆ ಒಟ್ಟು **ರೂ.28.56 ಲಕ್ಷ**ಗಳನ್ನು ಹೊಸ ಬೆಳೆ ವಿಮಾ ಯೋಜನೆಯ **ಲೆಕ್ಕ ಶೀರ್ಷಿಕೆ:2401-00-110-0-07-051(ಸಾಮಾನ್ಯ ವೆಚ್ಚ)**ರಡಿ ಈಗಾಗಲೇ ಬಿಡುಗಡೆ ಮಾಡಲಾಗಿರುವ ಅನುದಾನದಿಂದ ಭರಿಸಲು ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು, ಇವರಿಗೆ ಅನುಮತಿ ನೀಡಿ ಆದೇಶಿಸಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ. ಎಫ್‌ಡಿ 04 ಟಿಎಫ್‌ಪಿ 2020 ದಿನಾಂಕ: 24.11.2020 ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ

ಮತ್ತು ಅವರ ಹೆಸರಿನಲ್ಲಿ,

P. Sot 25/3/2024

(ಪಿ. ಸತ್ಯಭಾಮ)

ಸರ್ಕಾರದ ಅಧೀನ ಕಾರ್ಯದರ್ಶಿ

ಕೃಷಿ ಇಲಾಖೆ (ಯೋಜನೆ)

ಇವರಿಗೆ: –

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), (ಇ & ಆರ್ ಎಸ್ ಎ), (ಎ & ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಕೃಷಿ ಆಯುಕ್ತರು, ಬೆಂಗಳೂರು.
4. ಕೃಷಿ ನಿರ್ದೇಶಕರು, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
6. ರಕ್ಷಾ ಕಡತ: ಹೆಚ್ಚುವರಿ ಪ್ರತಿ.

****